# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 15-2-21

# ಬೈಎಲೆಕ್ಷನ್‌ಗೆ ಜೆಡಿಎಸ್ ಸ್ಪರ್ಧೆ!
## ಸಾಲ ಮಾಡಿಯಾದರೂ ಪಕ್ಷ ಉಳಿಸುವೆ: ಎಚ್‌ಡಿಕೆ

ಬೆಂಗಳೂರು: ಸದ್ಯದಲ್ಲೇ ಎದುರಾಗಲಿರುವ ವಿಧಾನಸಭೆ ಉಪಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂಬುದಾಗಿ ಪ್ರಕಟಿಸಿದ್ದ ಜೆಡಿಎಸ್ ಇದೀಗ ಮಸ್ಕಿ, ಸಿಂಧಗಿ ಹಾಗೂ ಬಸವ ಕಲ್ಯಾಣ ಕ್ಷೇತ್ರದ ಉಪಚುನಾವಣೆಗೆ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದಾಗಿ ಪ್ರಕಟಿಸಿದ್ದು, ಉಪಚುನಾವಣಾ ಕಣ ರಂಗೇರುವ ಲಕ್ಷಣ ಕಾಣುತ್ತಿದೆ.



ನಗರದ ಅರಮನೆ ಮೈದಾನದಲ್ಲಿ ನಡೆದ ಸಮಾವೇಶದಲ್ಲಿ ಇದನ್ನು ಸ್ಪಷ್ಟಪಡಿಸಿದ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ, ಪಕ್ಷದ ವರಿಷ್ಠರ ಒಪ್ಪಿಗೆ ಪಡೆದು ಮೂರೂ ಕ್ಷೇತ್ರಗಳ ಉಪಚುನಾವಣೆಗೆ ಅಭ್ಯರ್ಥಿ ಕಣಕ್ಕಿಳಿಸುವ ನಿರ್ಧಾರ ಕೈಗೊಳ್ಳಲಾಗುವುದು. ಹಣವಿಲ್ಲದಿದ್ದರೆ ಸಾಲ ಮಾಡಿಯಾದರೂ ಪಕ್ಷ ಉಳಿಸುವ ವರಿಷ್ಠರ ನಡೆಯನ್ನೇ ಅನುಸರಿಸುತ್ತೇನೆ. ಆದರೆ ಪಕ್ಷವನ್ನು ಯಾವುದೇ ಪಕ್ಷದ ಅಡಿಯಾಳಾಗಿ ಹೋಗಲು ಅವಕಾಶ ನೀಡಲ್ಲ ಎಂದಿದ್ದಾರೆ.

ವರಿಷ್ಠರಾದ ಎಚ್.ಡಿ.ದೇವೇಗೌಡರು ಉಪಚುನಾವಣೆಗೆ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದಿಲ್ಲ ಎಂದು ಹೇಳಿದ್ದರು. ಪಕ್ಷ ಆರ್ಥಿಕವಾಗಿ ಸಂಕಷ್ಟದಲ್ಲಿದ್ದ ಕಾರಣಕ್ಕೆ ಈ ನಿರ್ಧಾರ ಕೈಗೊಳ್ಳಲಾಗಿತ್ತು. ಇದೀಗ ಅವರು ಅನುಮತಿ ನೀಡಿದರೆ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗುವುದು ಎಂದು ಎಚ್‌ಡಿಕೆ ಸ್ಪಷ್ಟಪಡಿಸಿದ್ದಾರೆ.

### ಬಿಜೆಪಿ ಬಗ್ಗೆ ಮೃದು ಧೋರಣೆ ಇಲ್ಲ

**ಬಿಜೆಪಿ ಬಗ್ಗೆ ಮೃದು ಧೋರಣೆ ಇಲ್ಲ. ಯಾವ ಕಾರಣಕ್ಕೂ ಯಾವುದೇ ಪಕ್ಷದೊಂದಿಗೆ ರಾಜಿ ಮಾಡಿಕೊಳ್ಳುವ ಪ್ರಶ್ನೆ ಇಲ್ಲ. ಯಡಿಯೂರಪ್ಪನವರ ವಿರುದ್ಧ ವೈಯಕ್ತಿಕ ದ್ವೇಷವಿಲ್ಲ. ಆದರೆ 2008-13ರವರೆಗಿನ ಅವಧಿಯಲ್ಲಿ ನಡೆದ ಅಕ್ರಮ, ಭ್ರಷ್ಟಾಚಾರ, ಸಂಪತ್ತಿನ ಲೂಟಿ ವಿರುದ್ಧ ಹೋರಾಟ ನಡೆಸಿದ್ದೆ. ಅದಕ್ಕೆ ಪ್ರತಿಯಾಗಿ ನನ್ನ ವಿರುದ್ಧವೂ 4 ಪ್ರಕರಣ ದಾಖಲಿಸಿದ್ದು, ಇಂದಿಗೂ ನ್ಯಾಯಾಲಯಕ್ಕೆ ಅಲೆದಾಡುತ್ತಿದ್ದೇನೆ ಎಂದರು.**

ಜೆಡಿಎಸ್ ಪಕ್ಷವೇ ಇಲ್ಲ ಎನ್ನುವವರಿಗೆ ನಾವು ಸ್ಪರ್ಧಿಸದಿದ್ದರೆ ಆತಂಕ ಏಕೆ? ನಿಮಗೇಕೆ ಹೊಟ್ಟೆ ನೋವು ಎಂದು ಸಿದ್ದರಾಮಯ್ಯ ಹೆಸರೆತ್ತದೇ ಎಚ್‌ಡಿಕೆ ಪ್ರಶ್ನಿಸಿದ್ದಾರೆ. ಡಿಸಿಎಂ ಆಗಿದ್ದವರು ದೇವೇಗೌಡರಿಗೆ ದ್ರೋಹ ಬಗೆದು ಹೋದರು. 'ಅಹಿಂದ ಸಮಾವೇಶ' ನಡೆಸಿ ಜೆಡಿಎಸ್ ಅನ್ನು ಮುಗಿಸುವ ಹುನ್ನಾರ ನಡೆಸಿದರು ಎಂದೂ ಹೇಳಿದ್ದಾರೆ. ದೇವೇಗೌಡರು ಅಧಿಕಾರಕ್ಕಾಗಿ ಯಾರ ಮನೆ ಬಾಗಿಲಿಗೂ ಹೋಗಲಿಲ್ಲ. ಕಾಂಗ್ರೆಸ್‌ನವರು ಗತಿಯಿಲ್ಲದೆ ಕೈಕಾಲು ಕಟ್ಟಿ ದೇವೇಗೌಡರನ್ನು ಪ್ರಧಾನಿ ಮಾಡಿಕೊಂಡರು ಎಂದು ಹೇಳಿದರು.